ಸಂಪುಟ : 11 ಸಂಚಿಕೆ: 77 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 24 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 77 Pages : 4+2 Price : 3.00 Friday April 24 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಒಂದು ಸ್ಥಾನ ಏರಿಕೆ; 17ರಿಂದ 16ನೇ ಸ್ಥಾನಕ್ಕೆ ಗದಗ ಜಿಲ್ಲೆ–ಶೇ. 95.24 ಫಲಿತಾಂಶ ದಾಖಲೆ

# ಸಮಾಧಾನ ತಂದ ಎಸ್‌ಎಸ್‌ಎಲ್‌ಸಿ ಫಲಿತಾಂಶ!



**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಗದಗ ಜಿಲ್ಲೆ ರಾಜ್ಯಮಟ್ಟದಲ್ಲಿ ಈ ಬಾರಿ 16ನೇ ಸ್ಥಾನ ಪಡೆದುಕೊಂಡಿದ್ದು, ಕಳೆದೆರಡು ವರ್ಷಗಳಿಂದ 17ನೇ ಸ್ಥಾನದಲ್ಲಿದ್ದ ಜಿಲ್ಲೆಯು ಈ ಬಾರಿ ಕೇವಲ ಒಂದೇ ಒಂದು ಸ್ಥಾನ ಏರಿಕೆ ಕಂಡು ತೃಪ್ತಿಪಟ್ಟಿದೆ.

2023ರಲ್ಲಿ 25ನೇ ಸ್ಥಾನದಲ್ಲಿದ್ದ ಗದಗ ಜಿಲ್ಲೆ, 2024ರಲ್ಲಿ 17ನೇ ಸ್ಥಾನಕ್ಕೆ ಏರಿಕೆ ಕಂಡು ಹೊಸ ಭರವಸೆ ಮೂಡಿಸಿತ್ತು. 2025ರಲ್ಲಿಯೂ 17ನೇ ಸ್ಥಾನ ಕಾಪಾಡಿಕೊಂಡಿದ್ದರಿಂದ ಮುಂದಿನ ದಿನಗಳಲ್ಲಿ ಉತ್ತಮ ಫಲಿತಾಂಶದ ನಿರೀಕ್ಷೆ ಇತ್ತು. ಆದರೆ ಈ ಬಾರಿ ಕೇವಲ ಒಂದೇ ಸ್ಥಾನ ಏರಿಕೆಯಾಗಿರುವುದು ತುಸು ಸಮಾಧಾನ ತಂದರೂ, ತೃಪ್ತಿ ನೀಡಿಲ್ಲ ಎಂದು ಶಿಕ್ಷಣ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾದ 14,612 ವಿದ್ಯಾರ್ಥಿಗಳ ಪೈಕಿ 13,916 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು, ಶೇ. 95.24ರಷ್ಟು ಫಲಿತಾಂಶ ದಾಖಲಾಗಿದೆ. ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಈ ವರ್ಷ 27.32ರಷ್ಟು ಏರಿಕೆ ಕಂಡು ಬಂದಿದ್ದು, ರ್‍ಯಾಂಕಿಂಗ್‌ನಲ್ಲಿ ಒಂದು ಸ್ಥಾನ ಏರಿಕೆಯಾಗಿರುವುದು ಪಾಲಕರಲ್ಲಿ ಸಮಾಧಾನ ತಂದಿದೆ.

> "ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸಮಾಧಾನ ತಂದಿದೆ. ರಾಜ್ಯಮಟ್ಟದ ಸರಾಸರಿ ಅಂಕಗಳನ್ನು ಗಮನಿಸಿದಾಗ ನಮ್ಮ ಪ್ರಯತ್ನ ಫಲಿಸಿರುವುದು ಸ್ಪಷ್ಟವಾಗುತ್ತದೆ. ಶೈಕ್ಷಣಿಕ ವರ್ಷದ ಆರಂಭದಿಂದ ಸಚಿವ ಎಚ್.ಕೆ. ಪಾಟೀಲ, ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಸಿಇಒ ಅವರ ವಿಶೇಷ ಮುತ್ತುವರ್ಜಿಯಿಂದ ಈ ಫಲಿತಾಂಶ ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಶ್ರಮವಹಿಸಿ ಫಲಿತಾಂಶವನ್ನು ಮೇಲಕ್ಕೆ ಎತ್ತಲು ಪ್ರಯತ್ನಿಸುತ್ತೇವೆ,"
>
> **– ಆರ್.ಎಸ್. ಬುರಡಿ,** ಡಿಡಿಪಿಐ

#### ತಾಲೂಕುವಾರು ಫಲಿತಾಂಶ

*) ಗದಗ ಶಹರ – 2389 ಹಾಜರು, 2217 ಪಾಸ್
*) ಗದಗ ಗ್ರಾಮೀಣ – 2462 ಹಾಜರು, 2355 ಪಾಸ್
*) ಮುಂಡರಗಿ – 1897 ಹಾಜರು, 1849 ಪಾಸ್
*) ನರಗುಂದ – 1415 ಹಾಜರು, 1352 ಪಾಸ್
*) ರೋಣ – 3769 ಹಾಜರು, 3562 ಪಾಸ್
*) ಶಿರಹಟ್ಟಿ – 2680 ಹಾಜರು, 2581 ಪಾಸ್
*) ಒಟ್ಟು – 14612 ಹಾಜರು, 13916 ಪಾಸ್

#### ಜಿಲ್ಲೆಯ ಟಾಪರ್‌ಗಳು

ರೋಣ ತಾಲೂಕಿನ ಇಟಗಿ ಗ್ರಾಮದ ಆದರ್ಶ ವಿದ್ಯಾಲಯದ ಪ್ರವೀಣಕುಮಾರ ಈರಪ್ಪ ಸೊಬಗಿನ 622 (ಶೇ. 99.52) ಅಂಕ ಪಡೆದು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಮುಂಡರಗಿಯ ಎಸ್‌ಎಫ್‌ಎಸ್ ಶಾಲೆಯ ಸಂಧ್ಯಾ ಭೋಜಪ್ಪ ಲಮಾಣಿ 621 (ಶೇ. 99.36) ಅಂಕ ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ. ಗಜೇಂದ್ರಗಡದ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ಸುಷ್ಮಾ ಥಾವರೆಪ್ಪ ನಾಯಕ ಮತ್ತು ಮುಂಡರಗಿ ಆದರ್ಶ ವಿದ್ಯಾಲಯದ ರೇವಂತರೆಡ್ಡಿ ನಾಗರಾಜ ಮುಂಡರಗಿ ತಲಾ 620 (ಶೇ. 99.20) ಅಂಕ ಪಡೆದು ಮೂರನೇ ಸ್ಥಾನ ಹಂಚಿಕೊಂಡಿದ್ದಾರೆ.

#### ಜಿಲ್ಲೆಯ ಒಟ್ಟು ಶಾಲೆಗಳ ವಿವರ

*) ಸರ್ಕಾರಿ ಪ್ರೌಢ ಶಾಲೆಗಳು – 138
*) ಅನುದಾನಿತ ಪ್ರೌಢಶಾಲೆಗಳು – 105
*) ಅನುದಾನರಹಿತ ಶಾಲೆಗಳು – 73
*) ಒಟ್ಟು ಶಾಲೆಗಳು – 316

**ಕನ್ನಡ ಮಾಧ್ಯಮ ಫಲಿತಾಂಶ:** ಆಂಗ್ಲ ಮಾಧ್ಯಮದ ವಿದ್ಯಾರ್ಥಿಗಳು ಗರಿಷ್ಠ ಅಂಕಗಳೊಂದಿಗೆ ಜಿಲ್ಲಾ ಮಟ್ಟದಲ್ಲಿ ಮುನ್ನಡೆ ಸಾಧಿಸಿದ್ದಾರೆ. ಕನ್ನಡ ಮಾಧ್ಯಮದಲ್ಲಿ ಗಜೇಂದ್ರಗಡ ಸರಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯ ಪದ್ಮಾವತಿ ಮಾರುತಿ ಶಾಬಾದಿ 619 ಅಂಕ ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಶಿರಹಟ್ಟಿಯ ಸರಕಾರಿ ಪ್ರೌಢಶಾಲೆಯ ಸ್ನೇಹಾ ಶರಣಪ್ಪ ಕರಜಗಿ 618 ಅಂಕ ಪಡೆದು ದ್ವಿತೀಯ ಸ್ಥಾನ ಹಾಗೂ ಶಿರಹಟ್ಟಿ ತಾಲೂಕು ಹೆಬ್ಬಾಳ ಗ್ರಾಮದ ಕಾರ್ತಿಕರೆಡ್ಡಿ ವೀರೇಶರೆಡ್ಡಿ ಕಮರಡ್ಡಿ 615 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

**ಉರ್ದು ಮಾಧ್ಯಮ ಫಲಿತಾಂಶ:** ಗದಗ–ಬೆಟಗೇರಿಯ ಸರಕಾರಿ ಉರ್ದು ಶಾಲೆಯ ಆಲಿಯಾ ಮಕ್ತುಂಸಾಬ ಕುಕನೂರ 602 ಅಂಕ ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಆಫ್ರಿನ್‌ಬಾನು ಅಮೀನಸಾಬ ಗುಡಸಲಮನಿ 599 ಅಂಕ ಪಡೆದು ದ್ವಿತೀಯ ಸ್ಥಾನ ಹಾಗೂ ಗಜೇಂದ್ರಗಡ ಉರ್ದು ಪ್ರೌಢಶಾಲೆಯ ಆರ್ಶಿಯಾ ಜಹಾಂಗೀರಬಾಷಾ ಮುಲ್ಲಾ 594 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

**100ರಷ್ಟು ಫಲಿತಾಂಶ ಸಾಧನೆ:** ಜಿಲ್ಲೆಯಲ್ಲಿ 63 ಸರ್ಕಾರಿ, 29 ಅನುದಾನಿತ, 33 ಅನುದಾನರಹಿತ ಶಾಲೆಗಳು ಸೇರಿದಂತೆ ಒಟ್ಟು 125 ಶಾಲೆಗಳು ಶೇ. 100ರಷ್ಟು ಫಲಿತಾಂಶ ದಾಖಲಿಸಿವೆ. ಕೇವಲ 1 ಅನುದಾನಿತ ಶಾಲೆ ಶೇ. 60ಕ್ಕಿಂತ ಕಡಿಮೆ ಫಲಿತಾಂಶ ದಾಖಲಿಸಿದೆ. ಈ ಬಾರಿ ಯಾವುದೇ ಶಾಲೆಗಳು ಶೂನ್ಯಸಾಧನೆ ಮಾಡದಿರುವುದು ಆಶಾದಾಯಕ ಬೆಳವಣಿಗೆಯಾಗಿದೆ.

## ಎ. 29ರಂದು ನಿರುದ್ಯೋಗಿ ಅಭ್ಯರ್ಥಿಗಳಿಗೆ ನೇರ ಸಂದರ್ಶನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳಿಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಎಪ್ರಿಲ್ 29ರಂದು ಬುಧವಾರ ಬೆಳಗ್ಗೆ 10–00 ಗಂಟೆಗೆ ಜಿಲ್ಲಾ ಆಡಳಿತ ಭವನದ 2ನೇ ಮಹಡಿ, ರೂಂ ನಂ. 215ರಲ್ಲಿ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ನೇರ ಸಂದರ್ಶನದಲ್ಲಿ ಪುಕೂಕು ಇಂಡಿಯಾ ಪ್ರೈವೇಟ್ ಲಿಮಿಟೆಡ್, ಬೆಳಗಾವಿ (ಎಂಎನ್‌ಸಿ ಕಂಪನಿ) ಭಾಗವಹಿಸಲಿದ್ದು, ಡಿಪ್ಲೊಮಾ ಹಾಗೂ ಬಿ.ಎ, ಬಿ.ಕಾಂ, ಬಿ.ಎಸ್‌ಸಿ, ಬಿ.ಬಿ.ಎ ಸೇರಿದಂತೆ ಯಾವುದೇ ಪದವಿ ಹೊಂದಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಮಷಿನ್ ಆಪರೇಟರ್ ಮತ್ತು ಅಸೆಂಬ್ಲಿ ಡಿಪಾರ್ಟ್‌ಮೆಂಟ್ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. ಅಭ್ಯರ್ಥಿಗಳ ವಯಸ್ಸು 18 ರಿಂದ 26 ವರ್ಷಗಳೊಳಗಿರಬೇಕು. ಕೆಲಸದ ಸ್ಥಳ ಬೆಳಗಾವಿಯಾಗಿರುತ್ತದೆ. ಇ.ಎಸ್.ಐ, ಪಿ.ಎಫ್, ಬೋನಸ್ ಹಾಗೂ ಗ್ರ್ಯಾಚ್ಯುಟಿ ಸೇರಿದಂತೆ ಇತರೆ ಸೌಲಭ್ಯಗಳು ಲಭ್ಯವಿರುತ್ತವೆ.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮೆ (ಬಯೋಡೇಟಾ) ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಝೆರಾಕ್ಸ್ ಸಹಿತ ಹಾಜರಾಗಬೇಕು.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ನೋಂದಣಿಯನ್ನು ಸಂದರ್ಶನದ ದಿನವೇ ಮಾಡಿಸಬೇಕಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 9632607419, 6363330688, 9538862450 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕ್ರಿಕೆಟ್ ಟೂರ್ನಿ, ರಕ್ತದಾನ ಶಿಬಿರ ಸೇರಿ ವಿವಿಧ ಕಾರ್ಯಕ್ರಮಗಳು

# ಮೇ 1ಕ್ಕೆ ಗದಗದಲ್ಲಿ ಕಾರ್ಮಿಕರ ದಿನಾಚರಣೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮೇ 1ರಂದು ನಗರದ ಡಿ.ಸಿ. ಮಿಲ್ ಆವರಣದಲ್ಲಿ ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದು ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘದ ಅಧ್ಯಕ್ಷ ಮಾಬುಖಾನ ಜಿ. ಪಠಾಣ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಮಿಕ ದಿನಾಚರಣೆ ಅಂಗವಾಗಿ ಎಪ್ರಿಲ್ 25 ಹಾಗೂ 26ರಂದು ಕಟ್ಟಡ ಕಾರ್ಮಿಕರ ಸಂಘಟನೆಗಳ ಕ್ರಿಕೆಟ್ ಟೂರ್ನಾಮೆಂಟ್ ಆಯೋಜಿಸಲಾಗಿದ್ದು, ಎಪ್ರಿಲ್ 29ರಂದು ಕಟ್ಟಡ ಕಾರ್ಮಿಕರಿಂದ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.




ಮೇ 1ರಂದು ಬೆಳಿಗ್ಗೆ 9 ಗಂಟೆಗೆ ನಗರದ ಭೂಮರಡ್ಡಿ ವೃತ್ತದಲ್ಲಿ ಎಲ್ಲಾ ಕಟ್ಟಡ ಕಾರ್ಮಿಕರು ಜಮಾವಣೆಗೊಂಡು ಪಂಡಿತ ಪುಟ್ಟರಾಜ ಕವಿಗವಾಯಿಗಳವರ ಮೂರ್ತಿಗೆ ಮಾಲಾರ್ಪಣೆ ಮಾಡಲಿದ್ದಾರೆ. ಬಳಿಕ ಪಾದಯಾತ್ರೆ ಮೂಲಕ ರೋಟರಿ ಸರ್ಕಲ್ ಮಾರ್ಗವಾಗಿ ಗಾಂಧಿ ವೃತ್ತಕ್ಕೆ ತೆರಳಿ ಮಹಾತ್ಮ ಗಾಂಧೀಜಿಯವರ ಪ್ರತಿಮೆಗೆ ಗೌರವ ಸಲ್ಲಿಸಲಿದ್ದಾರೆ.

ನಂತರ ಗದಗ–ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಅದೇ ಮಾರ್ಗವಾಗಿ ಸಾಗುತ್ತಾ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಲಿದ್ದಾರೆ.

ಇದಾದ ನಂತರ ಡಿ.ಸಿ. ಮಿಲ್ ಕಂಪೌಂಡ್‌ನಲ್ಲಿರುವ ಸಂಘದ ಕಚೇರಿಯಲ್ಲಿ ಸಭೆ ನಡೆಯಲಿದ್ದು, ಸಂಘದ ಅಧ್ಯಕ್ಷರಾದ ಮಾಬುಖಾನ ಜಿ. ಪಠಾಣ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ.

ಈ ಸಂದರ್ಭದಲ್ಲಿ ವೇದಿಕೆ ಕಾರ್ಯಕ್ರಮಗಳು, 2025–26ನೇ ಶೈಕ್ಷಣಿಕ ವರ್ಷದ ದ್ವಿತೀಯ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ಪುರಸ್ಕಾರ ವಿತರಣೆ ನಡೆಯಲಿದೆ. ಜೊತೆಗೆ ಪೂಜ್ಯರಿಂದ ಆಶೀರ್ವಚನ ಹಾಗೂ ಸಂಘಟನೆಗಳ ದರಪಟ್ಟಿ ಬಿಡುಗಡೆ ಕಾರ್ಯಕ್ರಮ ಕೂಡ ಹಮ್ಮಿಕೊಳ್ಳಲಾಗಿದೆ.


ಕಾರ್ಯಕ್ರಮಕ್ಕೆ ದಿವ್ಯ ಸಾನಿಧ್ಯವನ್ನು ಸುಕ್ಷೇತ್ರ ಹರ್ಲಾಪೂರದ ಶ್ರೀ ಮ.ನಿ.ಪ್ರ. ಡಾ. ಅಭಿನವ ಕೊಟ್ಟೂರ ಮಹಾಸ್ವಾಮಿಗಳು ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಭಾಗವಹಿಸಲಿದ್ದಾರೆ. ಗದಗ–ಬೆಟಗೇರಿ ನಗರಸಭೆ ಸದಸ್ಯ ಕೃಷ್ಣಾ ಪರಾಪೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಕ್ಯಾನ್ಸರ್ ತಜ್ಞ ಡಾ. ಗಣೇಶರಾವ್ ಕುಂದಾಪೂರ, ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಕೃಷ್ಣಗೌಡ ಪಾಟೀಲ ಸೇರಿದಂತೆ ಹಲವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಚನ್ನವೀರಗೌಡ ಪಾಟೀಲ, ಚಾಂದಸಾಬ ಅಬ್ಬಿಗೇರಿ, ಕೊಪ್ಪಳ, ಕಲ್ಲೇಶಪ್ಪ ಕುಡಗುಂಟಿ, ಮೈನುದ್ದೀನ್ ಆದಮ ಬೈ, ಅಡಿವೆಪ್ಪ ಚಲವಾದಿ, ಚಾಂದಸಾಬ ಸೋಲಾಪುರ, ಮಹಮದ್ ಇಬ್ರಾಹಿಂ, ಆಫೀಜ್ ಮಾನ್ಸಾರಿ, ನೂರಹಮದ್ ಬಳ್ಳಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### 625ರಲ್ಲಿ 621 ಅಂಕ (99.36%); ಸಂಕಷ್ಟದಲ್ಲೂ ಅದ್ಭುತ ಸಾಧನೆ

# ಹಗರಿಬೊಮ್ಮನಹಳ್ಳಿಗೆ ಕೀರ್ತಿ ತಂದ ಸಹನಾ



**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಕುರದಗಡ್ಡಿ ಪ್ರದೇಶದ ವಿದ್ಯಾರ್ಥಿನಿ ಕು. ಸಹನಾ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ರಲ್ಲಿ 621 ಅಂಕಗಳು (99.36%) ಗಳಿಸಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದು ಅಪೂರ್ವ ಸಾಧನೆ ಮಾಡಿದ್ದಾಳೆ.

ತುಂಗಭದ್ರ ಡ್ಯಾಂ ನಿರ್ಮಾಣದ ವೇಳೆ ಜಾಗ ಬಿಟ್ಟು ಬಂದ ಹಳ್ಳಿಗಳಲ್ಲಿ ಹಗರಿಬೊಮ್ಮನಹಳ್ಳಿ ಪಟ್ಟಣದ 23 ವಾರ್ಡ್‌ಗಳಲ್ಲಿ ಅತ್ಯಂತ ಹಿಂದುಳಿದ ಪ್ರದೇಶವೆಂದು ಪರಿಗಣಿಸಲ್ಪಡುವ ಕುರದಗಡ್ಡಿಯಲ್ಲಿ ವಾಸವಾಗಿರುವ ಸಹನಾ, ಇತ್ತೀಚೆಗೆ ತಂದೆಯನ್ನು ಕಳೆದುಕೊಂಡ ದುಃಖದಲ್ಲಿಯೇ ತನ್ನ ಅಧ್ಯಯನವನ್ನು ಮುಂದುವರಿಸಿ ಈ ಸಾಧನೆ ಮಾಡಿರುವುದು ವಿಶೇಷವಾಗಿದೆ. ವರಲಹಳ್ಳಿಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ಶಿಕ್ಷಣ ಪಡೆಯುತ್ತಿರುವ ಸಹನಾ, ತನ್ನ ಸಹನೆ ಹಾಗೂ ದೃಢಸಂಕಲ್ಪದ ಮೂಲಕ ಈ ಸಾಧನೆ ಸಾಧಿಸಿದ್ದಾಳೆ. ದಿ. ಗುಂಡ್ರು ಸಣ್ಣ ಯಮುನಪ್ಪ (ವೆಲ್ಡಿಂಗ್ ಯಮುನ) ಅವರ ಪುತ್ರಿಯಾಗಿರುವ ಸಹನಾಳಿಗೆ ಶ್ರೀ ಭಗೀರಥ ಜಯಂತಿಯ ದಿನವೇ ಫಲಿತಾಂಶ ಪ್ರಕಟವಾಗಿರುವುದು ಮತ್ತೊಂದು ವಿಶೇಷವೆಂದು ಹೇಳಲಾಗಿದೆ.

ಸಹನಾಳ ಸಾಧನೆಗೆ ಶಾಲೆಯ ಶಿಕ್ಷಕರು, ಸಮಾಜದ ಬಂಧುಗಳು ಹಾಗೂ ಗುರು ಹಿರಿಯರು ಅಭಿನಂದನೆ ಸಲ್ಲಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಸಾಧನೆ ಮಾಡುವಂತೆ ಹಾರೈಸಿದರು.

#### ತಾಲೂಕಿಗೆ ದ್ವಿತೀಯ ಸ್ಥಾನ

ಹಗರಿಬೊಮ್ಮನಹಳ್ಳಿ ತಾಲೂಕಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ವಿಜಯನಗರ ಜಿಲ್ಲೆಯಲ್ಲಿ ದ್ವಿತೀಯ ಸ್ಥಾನ ಹಾಗೂ ವಿಭಾಗ ಮಟ್ಟದಲ್ಲಿಯೂ ದ್ವಿತೀಯ ಸ್ಥಾನ ಪಡೆದಿದೆ ಎಂದು ಬಿಇಒ ಪ್ರಭಾರಿ ಪ್ರಭಾಕರ್ ತಿಳಿಸಿದ್ದಾರೆ.

### ಅಧಿಕಾರಿ ಉದಯಕುಮಾರ ಯಲಿವಾಳ ತಕ್ಷಣ ಕ್ರಮ; ಸಾರ್ವಜನಿಕರಿಂದ ಪ್ರಶಂಸೆ

# ನಿರ್ಗತಿಕ ಮಹಿಳೆಗೆ ಮಾನವೀಯ ನೆರವು!

**■ ವಿಜಯಸಾಕ್ಷಿ ಸುದ್ದಿ, ಡಂಬಳ/ ಮುಂಡರಗಿ**

ಮುಂಡರಗಿ ಪಟ್ಟಣದ ಕೊಪ್ಪಳ ರಸ್ತೆಯಲ್ಲಿನ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುತ್ತಾ ಅಲೆದಾಡುತ್ತಿದ್ದ ನಿರ್ಗತಿಕ ಹಾಗೂ ಮಾನಸಿಕ ಅಸ್ವಸ್ಥ ಮಹಿಳೆಗೆ ಸಮಾಜ ಕಲ್ಯಾಣ ಇಲಾಖೆಯ ಸಹಕಾರದಿಂದ ಮಾನವೀಯ ನೆರವು ಒದಗಿಸಲಾಗಿದೆ.

ಪಟ್ಟಣದಲ್ಲಿ ದಾರಿಹೋಕರಿಗೆ ಅಸಹಜವಾಗಿ ವರ್ತಿಸುತ್ತಿದ್ದ ಈ ಮಹಿಳೆಯನ್ನು ಗಮನಿಸಿದ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಉದಯಕುಮಾರ ಯಲಿವಾಳ ತಕ್ಷಣ ಕ್ರಮ ಕೈಗೊಂಡರು. ಅವರು ಹುಬ್ಬಳ್ಳಿಯ ನಿರಾಶ್ರಿತರ ಪರಿಹಾರ ಕೇಂದ್ರದ ಸಹಾಯಕ ನಿರ್ದೇಶಕಿ ಶ್ರೀಮತಿ ನಂದಾ ಉರುಳಿ ಅವರೊಂದಿಗೆ ಸಂಪರ್ಕ ಸಾಧಿಸಿ ಅಗತ್ಯ ವ್ಯವಸ್ಥೆ ಮಾಡಿದರು.




ಅವರ ಮಾರ್ಗದರ್ಶನದಂತೆ ಕೇಂದ್ರದ ವಾರ್ಡನ್ ಮಹೇಶಪ್ಪ ಹಾಗೂ ಸಿಬ್ಬಂದಿ ತಂಡ ಮುಂಡರಗಿಗೆ ಆಗಮಿಸಿ, ಮಹಿಳೆಯನ್ನು ಮುಂಡರಗಿ ಪೊಲೀಸ್ ಠಾಣಾ ಆವರಣದಲ್ಲಿ ತಮ್ಮ ವಶಕ್ಕೆ ಪಡೆದು ಸುರಕ್ಷಿತವಾಗಿ ಹುಬ್ಬಳ್ಳಿಯ ಪರಿಹಾರ ಕೇಂದ್ರಕ್ಕೆ ಕರೆದುಕೊಂಡು ಹೋದರು. ಈ ಕುರಿತು ಮಾತನಾಡಿದ ಅಧಿಕಾರಿ ಉದಯಕುಮಾರ ಯಲಿವಾಳ ಅವರು, "ನಿರ್ಗತಿಕರು ಮತ್ತು ಭಿಕ್ಷಾಟನೆ ಮಾಡುವವರ ಪುನರ್ವಸತಿಗಾಗಿ ಸರ್ಕಾರದಿಂದ ವಿಶೇಷ ಪರಿಹಾರ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳಲ್ಲಿ ಆಹಾರ, ವಸತಿ, ಬಟ್ಟೆ, ಆರೋಗ್ಯ ತಪಾಸಣೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಕುಟುಂಬದ ವಿವರ ದೊರೆತಲ್ಲಿ ಸಂಬಂಧಿಕರ ವಶಕ್ಕೆ ಒಪ್ಪಿಸುವ ವ್ಯವಸ್ಥೆಯೂ ಇದೆ," ಎಂದು ತಿಳಿಸಿದ್ದಾರೆ. ಈ ಕ್ರಮದಿಂದ ಸಾರ್ವಜನಿಕರಲ್ಲಿ ಉಂಟಾಗಿದ್ದ ಆತಂಕ ನಿವಾರಣೆಯಾಗಿದ್ದು, ಸ್ಥಳೀಯರು ಅಧಿಕಾರಿಗಳ ಕಾರ್ಯಕ್ಕೆ ಸಂತಸ ಹಾಗೂ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಮೇ 10ರಂದು ಆಚರಿಸಲಾಗುವ ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ನಿಮಿತ್ತ ಎಪ್ರಿಲ್ 24ರಂದು ಪೂರ್ವಭಾವಿ ಸಭೆ ನಡೆಯಲಿದೆ.

ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ಜರುಗಲಿದೆ.

ಸಭೆಗೆ ಸಂಬಂಧಪಟ್ಟವರು ಹಾಜರಾಗಿ ಸಲಹೆ ಹಾಗೂ ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಗದಗ:** ಜಿಲ್ಲಾಡಳಿತ ಏರ್ಪಡಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ (C.B.S.E.) ಯಲ್ಲಿ ಶೇ. 95 ಅಂಕಗಳನ್ನು ಪಡೆದು ಪ್ರಥಮ ದರ್ಜೆಯಲ್ಲಿ ಪಾಸಾದ ಗದುಗಿನ ಪ್ರತಿಭಾನ್ವಿತ ವಿದ್ಯಾರ್ಥಿ ಬಾಲಾಜಿ ಶ್ರೀನಿವಾಸ ವಲ್ಲೂರನಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ವಿ.ಪ. ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ ಮುಂತಾದವರು ಉಪಸ್ಥಿತರಿದ್ದರು.

# ಪ್ರಮಾಣಪತ್ರ ವಿತರಣೆ ವಿಳಂಬ: ವಿಶೇಷ ಚೇತನರ ಪ್ರತಿಭಟನೆ

## 68 ಪ್ರಮಾಣಪತ್ರ ನೀಡಲು ಒತ್ತಾಯ, ಆಸ್ಪತ್ರೆ ಮುಂದೆ ಧರಣಿ

### ಇಂದು ಪ್ರಮಾಣಪತ್ರ ವಿತರಣೆ?

ಸಮಸ್ಯೆ ಪರಿಹಾರದ ನಿಟ್ಟಿನಲ್ಲಿ ಎಪ್ರಿಲ್ 24ರಂದು ಸಂಜೆ 4 ಗಂಟೆಗೆ ತಾಲೂಕು ಒಕ್ಕೂಟದ ಮುಖಂಡರೊಂದಿಗೆ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳ ಸಭೆ ನಡೆಸಲು ಒಪ್ಪಿಗೆ ನೀಡಲಾಗಿದೆ. ದೃಢೀಕರಿಸಿದ ಒಟ್ಟು 68 ಪ್ರಮಾಣಪತ್ರಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಲಾಯಿತು.




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಪಾಸಣಾ ಶಿಬಿರದಲ್ಲಿ ದೃಢೀಕರಿಸಿದ ವೈದ್ಯಕೀಯ ಪ್ರಮಾಣಪತ್ರಗಳನ್ನು ನೀಡಲು ವಿಳಂಬ ಮಾಡಿರುವುದನ್ನು ಖಂಡಿಸಿ, ಕರ್ನಾಟಕ ರಾಜ್ಯ ಅಂಗವಿಕಲರ ಹಾಗೂ ಪಾಲಕರ ಒಕ್ಕೂಟದ ಹಗರಿಬೊಮ್ಮನಹಳ್ಳಿ ತಾಲೂಕು ಸಮಿತಿ ವತಿಯಿಂದ ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮುಂದೆ ಪ್ರತಿಭಟನೆ ನಡೆಸಲಾಯಿತು.

2025ರ ಆಗಸ್ಟ್ ತಿಂಗಳ ಕೊನೆಯ ವಾರದಲ್ಲಿ ಹಗರಿಬೊಮ್ಮನಹಳ್ಳಿ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣಪತ್ರ ಹಾಗೂ ಯುಡಿಐಡಿ ಕಾರ್ಡ್ ನೀಡಲು ಸರ್ಕಾರದಿಂದ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಈ ಶಿಬಿರದಲ್ಲಿ ತಾಲೂಕಿನ ನೂರಕ್ಕೂ ಹೆಚ್ಚು ಅಂಗವಿಕಲರು ಭಾಗವಹಿಸಿದ್ದರು. ಅವರಲ್ಲಿ ಸುಮಾರು 68ಕ್ಕೂ ಹೆಚ್ಚು ಅರ್ಹ ಅಂಗವಿಕಲರಿಗೆ ತಜ್ಞ ವೈದ್ಯರು ನಿಯಮಾನುಸಾರ ತಪಾಸಣೆ ನಡೆಸಿ ಪ್ರಮಾಣಪತ್ರಗಳನ್ನು ದೃಢೀಕರಿಸಿದ್ದರು. ಆದರೆ ಈ ಪ್ರಮಾಣಪತ್ರಗಳನ್ನು ಕಳೆದ 7 ತಿಂಗಳಿನಿಂದ ವಿತರಣೆ ಮಾಡದಿರುವುದನ್ನು ಖಂಡಿಸಿ ಪ್ರತಿಭಟನೆ ನಡೆಸಲಾಗಿದೆ.

ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ರಂಗಪ್ಪ ದಾಸರ ಮಾತನಾಡಿ, ಅಂಗವಿಕಲರ ಹಕ್ಕುಗಳ ಕಾಯ್ದೆಯ ಪ್ರಕಾರ ವೈದ್ಯಕೀಯ ಪ್ರಮಾಣಪತ್ರ ಹಾಗೂ ಸರ್ಕಾರಿ ಸೌಲಭ್ಯಗಳು ಮನೆಬಾಗಿಲಿಗೆ ತಲುಪಬೇಕು. ಆದರೆ 7 ತಿಂಗಳಾದರೂ ಪ್ರಮಾಣಪತ್ರ ನೀಡದಿರುವುದು ಖಂಡನೀಯ ಎಂದು ಹೇಳಿದರು.

ಅಂಗವಿಕಲರ ಮುಖಂಡ ಉಸ್ಮಾನ ಭಾಷಾ ಮಾತನಾಡಿ, ವೈದ್ಯಕೀಯ ತಪಾಸಣಾ ಶಿಬಿರದಲ್ಲಿ ದೃಢೀಕರಿಸಿದ ಪ್ರಮಾಣಪತ್ರಗಳನ್ನು ಆಸ್ಪತ್ರೆಯಲ್ಲಿ ಉಳಿಸಿಕೊಂಡಿರುವುದು ಸರ್ಕಾರದ ಆದೇಶ ಉಲ್ಲಂಘನೆಯಾಗಿದ್ದು, ಕರ್ತವ್ಯ ಲೋಪವಾಗಿದೆ. ಇದರಿಂದ ಅರ್ಹ ಅಂಗವಿಕಲರು ಹಲವು ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಆರೋಪಿಸಿದರು. ಕೂಡಲೇ ಪ್ರಮಾಣಪತ್ರಗಳನ್ನು ವಿತರಿಸಿ, ನಿರ್ಲಕ್ಷ್ಯ ವಹಿಸಿದ ವೈದ್ಯಾಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ಮನವಿ ಪತ್ರವನ್ನು ತಾಲೂಕ ವೈದ್ಯಾಧಿಕಾರಿಗಳ ಮೂಲಕ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷರಾದ ಬಿ. ರೇಣುಕಾ ಪ್ರತಿಭಟನಾ ಸಭೆಯನ್ನುದ್ದೇಶಿಸಿ ಮಾತನಾಡಿದರು. ತಾಲೂಕ ಮುಖಂಡರಾದ ಖಲೀಲಭಾಷಾ, ನಾಗರತ್ನ, ಹುಲುಗಪ್ಪ, ಮರಬ್ಬಿಹಾಳು ಬಸವರಾಜ, ಬನ್ನಿಕಲ್ಲು ಧರ್ಮ, ಎಕೆ ಮಂಜುನಾಥ, ಚಾಂದ್‌ಭಾಷಾ, ಪದ್ಮಣ್ಣ, ದೇವರಾಜ, ಚಂದ್ರಪ್ಪ ಸೇರಿದಂತೆ ಹಲವರು ನಾಯಕತ್ವ ವಹಿಸಿದ್ದರು. ಜನವಾದಿ ಮಹಿಳಾ ಸಂಘಟನೆಯ ಮುಖಂಡರಾದ ಸರ್ದಾರ್ ಹುಲಿಗೆಮ್ಮ ಹಾಗೂ ಇತರರು ಭಾಗವಹಿಸಿದ್ದರು.

# ಗದಗಕ್ಕೆ ವಿಶ್ವಪ್ರಿಯತೀರ್ಥ ಶ್ರೀಪಾದಂಗಳ ಭೇಟಿ: ಪ್ರವಚನ– ವಿವಿಧ ಧಾರ್ಮಿಕ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಉಡುಪಿಯ ಅದಮಾರು ಹಿರಿಯ ಮಠಾಧೀಶರಾದ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು ಎಪ್ರಿಲ್ 24ರಿಂದ ಗದಗದ ವೀರನಾರಾಯಣ ದೇವಸ್ಥಾನಕ್ಕೆ ಆಗಮಿಸಿ ಪ್ರವಚನ ನೀಡಲಿದ್ದಾರೆ.

ಸಂಜೆ 6.00 ಗಂಟೆಗೆ ಶ್ರೀಗಳಿಗೆ ಸ್ವಾಗತ, ವೇದಘೋಷ ಹಾಗೂ ಮಾಲಾರ್ಪಣೆ ನಡೆಯಲಿದ್ದು, ನಂತರ ಶ್ರೀಗಳಿಂದ ಅನುಗ್ರಹ ಸಂದೇಶ, ತೊಟ್ಟಿಲೋತ್ಸವ ಹಾಗೂ ಅಲ್ಪೋಪಹಾರ ವ್ಯವಸ್ಥೆ ಮಾಡಲಾಗಿದೆ.

ಎಪ್ರಿಲ್ 25ರಂದು ಬೆಳಿಗ್ಗೆ 8.00 ರಿಂದ 10.30ರವರೆಗೆ ಅಪೇಕ್ಷಿತ ಭಕ್ತರ ಮನೆಗಳಲ್ಲಿ ಪಾದಪೂಜೆ ನಡೆಯಲಿದೆ. ಸಂಜೆ 6.30ಕ್ಕೆ ಶ್ರೀಗಳಿಂದ ಪ್ರವಚನ ನಡೆಯಲಿದ್ದು, ರಾತ್ರಿ 8.30ಕ್ಕೆ ರಾಘವೇಂದ್ರ ರಾ. ಜೋಷಿ ಅವರ ಮನೆಯಲ್ಲಿ ತೊಟ್ಟಿಲೋತ್ಸವ ಮತ್ತು ಅಲ್ಪೋಪಹಾರ ಏರ್ಪಡಿಸಲಾಗಿದೆ.

ಎಪ್ರಿಲ್ 26ರಂದು ವೀರನಾರಾಯಣ ದೇವಸ್ಥಾನದಲ್ಲಿ ಬೆಳಿಗ್ಗೆ 8.00ಕ್ಕೆ ಸಂಸ್ಥಾನ ಪೂಜೆ, ಕಲ್ಯಾಣೋತ್ಸವ, ಶ್ರೀಗಳ ಸಾರ್ವಜನಿಕ ಪಾದಪೂಜೆ, ಲಘುರಥೋತ್ಸವ, ನೈವೇದ್ಯ ಹಾಗೂ ಮಹಾಪ್ರಸಾದ ವಿತರಣೆ ನಡೆಯಲಿದೆ. ಸಂಜೆ 6.30ಕ್ಕೆ ಶ್ರೀಗಳಿಂದ ಅನುಗ್ರಹ ಸಂದೇಶ ನೀಡಲಾಗುತ್ತದೆ. ಬಳಿಕ ಗೋಪಾಲ ಗುಡಿ ಮನೆಯಲ್ಲಿ ತೊಟ್ಟಿಲೋತ್ಸವ ಹಾಗೂ ಅಲ್ಪೋಪಹಾರ ವ್ಯವಸ್ಥೆ ಮಾಡಲಾಗಿದೆ.

# ಬಡ ಮಗಳ ಮದುವೆಗೆ ಅಕ್ಕಾ ಕೆಫೆಯ ಲಾಭಾಂಶ ನೆರವು



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಪಂಚಾಯತದ ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಡಿಸಿ ಕಂಪೌಂಡ್ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಕ್ಕಾ ಕೆಫೆಯ ಮಹಿಳಾ ಸದಸ್ಯರು ತಮ್ಮ ಲಾಭಾಂಶವನ್ನು ಬಡ ಹೆಣ್ಣುಮಗಳ ಮದುವೆಗೆ ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಕಬ್ಬೆನೂರ ಗ್ರಾಮದ ಕಾಮಧೇನು ಸಂಜೀವಿನಿ ಮಹಿಳಾ ಸ್ವ–ಸಹಾಯ ಸಂಘವು ಪ್ರಸಕ್ತ ವರ್ಷ ಅಕ್ಕಾ ಕೆಫೆಯ ಲಾಭಾಂಶದಿಂದ ಕುಂದಗೋಳ ತಾಲೂಕಿನ ಗುಡೆನಕಟ್ಟಿ ಗ್ರಾಮದ ಬಡ ಕುಟುಂಬದ ಮಗಳು ಭೂಮಿಕಾ ಸಿದ್ದುನವರ ಮದುವೆಗೆ ರೂ. 20 ಸಾವಿರ ನಗದು, ಸೀರೆ, ಹಣ್ಣು–ಕಾಯಿ ಹಾಗೂ ತಾಂಬೂಲವನ್ನು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರ ಹಸ್ತದಿಂದ ವಿತರಿಸಿತು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಘದ ಪ್ರತಿನಿಧಿಗಳಾದ ರಾಜೇಶ್ವರಿ ಮಂಜುನಾಥ ಪವಾಡಿ ಮತ್ತು ಶಿವಲೀಲಾ ಕಮ್ಮಾರ ಅವರು ಲಕ್ಷ್ಮವ್ವ ಸಿದ್ದುನವರ ಹಾಗೂ ಅವರ ಮಗಳಿಗೆ ನೆರವು ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಅಕ್ಕಾ ಕೆಫೆಯ ಸದಸ್ಯರ ಕಾರ್ಯ ಇತರರಿಗೆ ಮಾದರಿಯಾಗಿದ್ದು, ತಮ್ಮ ಲಾಭದ ಹಣವನ್ನು ಸಮಾಜಮುಖಿ ಕಾರ್ಯಗಳಿಗೆ ಬಳಸುತ್ತಿರುವುದು ಶ್ಲಾಘನೀಯ ಎಂದರು.

ಗುಡೆನಕಟ್ಟಿ ಗ್ರಾಮದ ಸಿದ್ದುನವರ ಕುಟುಂಬದ ಯಜಮಾನ ಬಸವರಾಜ ಅವರು ನಿಧನ ಹೊಂದಿರುವ ಹಿನ್ನೆಲೆಯಲ್ಲಿ ಮಗಳ ಮದುವೆಯ ಜವಾಬ್ದಾರಿ ತಾಯಿ ಲಕ್ಷ್ಮವ್ವಳ ಮೇಲಿದೆ. ಇಂತಹ ಸಂದರ್ಭದಲ್ಲಿ ಸಂಘದ ಸದಸ್ಯರು ನೆರವು ನೀಡಿರುವುದು ದೊಡ್ಡ ಸಹಾಯವಾಗಿದೆ ಎಂದು ಅವರು ಹೇಳಿದರು.

ಇದೇ ವೇಳೆ ಸಂಘದ ಸೇವಾ ಮನೋಭಾವವನ್ನು ಮೆಚ್ಚಿದ ಜಿಲ್ಲಾಧಿಕಾರಿಗಳು, ಈ ಸಂಘಕ್ಕೆ ಲಭಿಸಿರುವ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ ಸಾರ್ಥಕವಾಗಿದೆ ಎಂದು ಅಭಿನಂದಿಸಿದರು.

# ಇಂದಿನ ಸಮಾಜಕ್ಕೆ ಬಸವಣ್ಣನವರ ತತ್ವಗಳು ಅಗತ್ಯ

■ವಿಜಯಸಾಕ್ಷಿ ಸುದ್ದಿ, ರೋಣ

ಕಲುಷಿತಗೊಳ್ಳುತ್ತಿರುವ ಇಂದಿನ ಸಮಾಜದಲ್ಲಿ ಬಸವಣ್ಣನವರ ತತ್ವಗಳು ಅತ್ಯಂತ ಅಗತ್ಯವಾಗಿದ್ದು, ಈ ಹಿನ್ನಲೆಯಲ್ಲಿ ಕಳೆದ 12 ವರ್ಷಗಳಿಂದ ಹಜರತ್ ಸುಲೇಮಾನ್ ಶಾವಲಿ ದರ್ಗಾದಲ್ಲಿ ಬಸವ ಜಯಂತಿಯನ್ನು ಆಚರಿಸಲಾಗುತ್ತಿದೆ ಎಂದು ದರ್ಗಾದ ಪೀಠಾಧಿಪತಿ ಹಜರತ್ ಸುಲೇಮಾನ್ ಶಾವಲಿ ಅಜ್ಜನವರು ಹೇಳಿದರು.

ಪಟ್ಟಣದ ಹೊರಪೇಟಿಯಲ್ಲಿರುವ ದರ್ಗಾದಲ್ಲಿ ಜಗಜ್ಯೋತಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಬಸವಣ್ಣನವರು 12ನೇ ಶತಮಾನದಲ್ಲಿ ಸಮಾನತೆ ಸಾರಿದ ಮಹಾನ್ ಚಿಂತಕರಾಗಿದ್ದು, ಅನುಭವ ಮಂಟಪದ ಮೂಲಕ ಎಲ್ಲ ವರ್ಗದವರಿಗೆ, ವಿಶೇಷವಾಗಿ ಮಹಿಳೆಯರಿಗೆ ಸ್ವಾತಂತ್ರ್ಯ ಮತ್ತು ಸಮಾನ ಅವಕಾಶಗಳನ್ನು ನೀಡಿದವರು ಎಂದರು.

ಬಸವಣ್ಣನವರ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿದ್ದು, ಅವರ ವಚನಗಳ ಅರ್ಥವನ್ನು ತಿಳಿದುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯ ಎಂದು ಹೇಳಿದರು. ದರ್ಗಾ–ಕ್ಕೆ ಸಾವಿರಾರು ಭಕ್ತರು ಆಗಮಿಸುತ್ತಿದ್ದು, ಎಲ್ಲ ಧರ್ಮಗಳ ಜನರು ಸಹೋದರತ್ವದಿಂದ ಬದುಕುತ್ತಿರುವುದು ನಮ್ಮ ಪರಂಪರೆಯ ಮಹತ್ವವನ್ನು ತೋರಿಸುತ್ತದೆ ಎಂದರು.

ಜಾತಿ–ಮತ ಭೇದವಿಲ್ಲದೆ ಎಲ್ಲರನ್ನೂ ಒಗ್ಗೂಡಿಸಿದ ಬಸವಣ್ಣನವರು ಮಹಾನ್ ಸಮಾಜ ಸುಧಾರಕರಾಗಿದ್ದು, ಅವರ ತತ್ವಗಳನ್ನು ಅನುಸರಿಸುವುದು ಇಂದಿನ ಅಗತ್ಯವಾಗಿದೆ. ಕಾಯಕ ತತ್ವವನ್ನು ಸಾರಿದ ಅವರು ಪ್ರತಿಯೊಬ್ಬರೂ ದುಡಿಯುವ ಮೂಲಕ ಬದುಕನ್ನು ಕಟ್ಟಿಕೊಳ್ಳಬೇಕು ಎಂದು ತಿಳಿಸಿದರು.

ಬಸವ ಜಯಂತಿ ದೇಶದಲ್ಲಷ್ಟೇ ಅಲ್ಲದೆ ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. ಲಂಡನ್‌ನಲ್ಲಿಯೂ ಅವರ ಮೂರ್ತಿ ಪ್ರತಿಷ್ಠಾಪನೆಯಾಗಿರುವುದು ಅವರ ಚಿಂತನೆಗಳ ಮಹತ್ವವನ್ನು ತೋರಿಸುತ್ತದೆ. ವಿದ್ಯಾವಂತ ಯುವಕರು ಬಸವಣ್ಣನವರ ವಚನ ಸಾಹಿತ್ಯವನ್ನು ಅಧ್ಯಯನ ಮಾಡಿ ಸಮಾಜಕ್ಕೆ ಪರಿಚಯಿಸಬೇಕು. ಪೋಷಕರು ತಮ್ಮ ಮಕ್ಕಳಿಗೆ ಸಮಾಜ ಸುಧಾರಕರ ಆದರ್ಶಗಳನ್ನು ತಿಳಿಸುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಹೊರಪೇಟಿ ಓಣಿಯ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದರು.



# ಐಪಿಎಲ್ ಬೆಟ್ಟಿಂಗ್ ಸಾಲಕ್ಕೆ ಹೆದರಿ ಯುವಕ ಆತ್ಮಹತ್ಯೆ

■ವಿಜಯಸಾಕ್ಷಿ ಸುದ್ದಿ, ಮಂಡ್ಯ

ಐಪಿಎಲ್ ಬೆಟ್ಟಿಂಗ್ ಚಟದಿಂದ ಉಂಟಾದ ಭಾರೀ ಸಾಲದ ಒತ್ತಡಕ್ಕೆ ಹೆದರಿ ಯುವಕನೊಬ್ಬ ಆತ್ಮಹತ್ಯೆ ಮಾಡಿಕೊಂಡ ಘಟನೆ ಮಂಡ್ಯ ಜಿಲ್ಲೆಯಲ್ಲಿ ನಡೆದಿದೆ.

ಮದ್ದೂರು ತಾಲೂಕಿನ ತರೀ–ಕೆರೆ ಗ್ರಾಮದ ನಿರೂಪ್ (28) ಮೃತ ಯುವಕನಾಗಿದ್ದಾನೆ. ಇವರು ಕೊಪ್ಪದ ಬೆಳ್ಳೇಕರೆ ವೃತ್ತದ ಬಳಿ ದಿನಸಿ ಅಂಗಡಿ ನಡೆಸುತ್ತಿದ್ದರು ಎಂದು ತಿಳಿದುಬಂದಿದೆ.



ಐಪಿಎಲ್ ಬೆಟ್ಟಿಂಗ್‌ಗೆ ಒಳಗಾದ ನಿರೂಪ್ ಸುಮಾರು 50 ಲಕ್ಷಕ್ಕೂ ಹೆಚ್ಚು ಸಾಲ ಮಾಡಿಕೊಂಡಿದ್ದನು ಎನ್ನಲಾಗಿದೆ. ಸಾಲದ ಒತ್ತಡ ಮತ್ತು ಭಯದಿಂದ ಮನನೊಂದು, ರಾತ್ರಿ ವೇಳೆ ನೇಣಿಗೆ ಶರಣಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಮೂಲಗಳು ತಿಳಿಸಿವೆ.

ಘಟನೆ ಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಸತ್ಯ ಸಂಸ್ಕೃತಿ ಗೌರವಿಸದಿದ್ದರೆ ಶಾಂತಿ ನೆಮ್ಮದಿ ದೊರಕದು

■ವಿಜಯಸಾಕ್ಷಿ ಸುದ್ದಿ, ಹರಿಹರ


ಮಾನವ ಜೀವನ ಅಮೂಲ್ಯ. ಯೌವನ ಸಂಪತ್ತು ಶಾಶ್ವತವಲ್ಲ. ಧರ್ಮ ಮತ್ತು ದೇವರು ಮನಸ್ಸನ್ನು ಅರಳಿಸುತ್ತವೆ. ಸತ್ಯ ಸಂಸ್ಕೃತಿಯನ್ನು ಗೌರವಿಸದಿದ್ದರೆ ಜೀವನದಲ್ಲಿ ಶಾಂತಿ ನೆಮ್ಮದಿ ದೊರಕಲಾರದು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದರು.

ತಾಲೂಕಿನ ಮಲೆಬೆನ್ನೂರು–ಕುಂಬಳೂರು ಶ್ರೀ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ ದೇವಸ್ಥಾನದ 5ನೇ ವರ್ಷದ ವಾರ್ಷಿಕೋತ್ಸವ ಅಂಗವಾಗಿ ನಡೆದ ಧರ್ಮ ಜಾಗೃತಿ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಮಾನವನ ಮನಸ್ಸು ಚಂಚಲವಾಗಿದ್ದು, ಅದನ್ನು ಶಾಂತಗೊಳಿಸಲು ಆಧ್ಯಾತ್ಮ ಸಾಧನೆ ಅಗತ್ಯ. ಸತ್ಯದ ಸತ್ಪಥದಲ್ಲಿ ನಡೆಯುವ ಮೂಲಕ ಜೀವನ ವಿಕಾಸಗೊಳ್ಳುತ್ತದೆ. ಎಲ್ಲ ಧರ್ಮಗಳ ಮೂಲ ಗುರಿ ಶಾಂತಿಯುತ ಮತ್ತು ಸಮೃದ್ಧ ಬದುಕೇ ಆಗಿದೆ ಎಂದು ಹೇಳಿದರು.

ದುಷ್ಟ ಶಕ್ತಿಗಳ ನಾಶ ಹಾಗೂ ಸಾತ್ವಿಕ ಶಕ್ತಿಯ ಬೆಳವಣಿಗೆಗೆ ವೀರಭದ್ರಸ್ವಾಮಿ ಅವತಾರವಾಗಿದೆ ಎಂಬ ನಂಬಿಕೆ ಇದೆ. ಈ ಭಾಗದಲ್ಲಿ ದೇವಸ್ಥಾನ ನಿರ್ಮಿಸಿ ಜನಕಲ್ಯಾಣ ಕಾರ್ಯಗಳನ್ನು ನಡೆಸುತ್ತಿರುವುದು ಶ್ಲಾಘನೀಯವಾಗಿದೆ. ದೇವಸ್ಥಾನಗಳು ನೊಂದು ಬೆಂದು ಬಂದ ಭಕ್ತರಿಗೆ ಶಾಂತಿ ಮತ್ತು ನೆಮ್ಮದಿ ನೀಡುವ ಪವಿತ್ರ ತಾಣಗಳಾಗಿವೆ ಎಂದು ಜಗದ್ಗುರುಗಳು ಹೇಳಿದರು.

ಟ್ರಸ್ಟಿನ ಉಪಾಧ್ಯಕ್ಷ ಬಿ. ಚಿದಾನಂದಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಶ್ರಮ ಮತ್ತು ಆದರ್ಶ ಮೌಲ್ಯಗಳ ಮೂಲಕವೇ ಜೀವನದಲ್ಲಿ ಯಶಸ್ಸು ಸಾಧ್ಯ. ಶ್ರೀ ವೀರಭದ್ರೇಶ್ವರ ಕ್ಷೇತ್ರದಿಂದ ಜನಕಲ್ಯಾಣ ಕಾರ್ಯಗಳು ನಿರಂತರವಾಗಿ ನಡೆಯುತ್ತಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆಯನ್ನು ನೆರವೇರಿಸಿದರು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅವರ ಆಶೀರ್ವಾದ ಪಡೆದರು.



# ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 'ಮೀಲಾಂಜೆ–26' ತಾಂತ್ರಿಕ ಮೇಳ

## ಎ.25–26ರಂದು ಎರಡು ದಿನಗಳ ಕಾರ್ಯಕ್ರಮ – ಪದವಿ ಪ್ರಧಾನ ಸಮಾರಂಭ, ಪ್ಲೇಸ್‌ಮೆಂಟ್ ಡೇ ವಿಶೇಷತೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದಲ್ಲಿ ಉನ್ನತ ತಾಂತ್ರಿಕ ಶಿಕ್ಷಣದಲ್ಲಿ ಹೆಸರಾಗಿರುವ ಪಟ್ಟಣದ ಶ್ರೀಮತಿ ಕಮಲಾ ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ರಾಷ್ಟ್ರೀಯ ಮಟ್ಟದ ತಾಂತ್ರಿಕ–ಸಾಂಸ್ಕೃತಿಕ ಮೇಳ 'ಮೀಲಾಂಜೆ–26' ಹಾಗೂ ಪದವಿ ಪ್ರಧಾನ ಸಮಾರಂಭವನ್ನು ಎಪ್ರಿಲ್ 25 ಮತ್ತು 26ರಂದು ಹಮ್ಮಿಕೊಳ್ಳಲಾಗಿದೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ತಿಳಿಸಿದ್ದಾರೆ.

ಈ ಕುರಿತು ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 23 ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಅಗಡಿ ಸಂಸ್ಥೆ ಉತ್ತರ ಕರ್ನಾಟಕದ ಪ್ರಮುಖ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾಗಿದೆ. ವಿವಿಧ ರಾಜ್ಯಗಳಿಂದ ವಿದ್ಯಾರ್ಥಿಗಳು 'ಮೀಲಾಂಜೆ–26' ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲಿದ್ದಾರೆ ಎಂದರು.

ಎಪ್ರಿಲ್ 25ರಂದು ಬೆಳಿಗ್ಗೆ 10 ಗಂಟೆಗೆ ಕಾಲೇಜಿನ ಸಿವಿಲ್ ಸಭಾಂಗಣದಲ್ಲಿ ತಾಂತ್ರಿಕ ಮೇಳ ಉದ್ಘಾಟನೆಯಾಗಲಿದ್ದು, ಕಾಲೇಜಿನ ಹಳೆಯ ವಿದ್ಯಾರ್ಥಿ ಹಾಗೂ ಬೆಂಗಳೂರಿನ ಹರ್ಮನ್ ಮಿಲ್ಲರ್ ಕಂಪನಿಯ ಭಾರತ ಕಾರ್ಯಾಚರಣೆಗಳ ಮುಖ್ಯಸ್ಥ ಮಹೇಶ್ ಪಾಟೀಲ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ.

ಮುಖ್ಯ ಸಂಯೋಜಕ ಈರಣ್ಣ ಮಕರಬ್ಬಿ ಮಾತನಾಡಿ, ಪದವಿ ಪ್ರಧಾನ ಸಮಾರಂಭಕ್ಕೆ ಶಿಕ್ಷಣ ತಜ್ಞ ಸುರೇಶ್ ಕುಲಕರ್ಣಿ ಆಗಮಿಸಲಿದ್ದಾರೆ. ಎರಡೂ ಕಾರ್ಯಕ್ರಮಗಳಿಗೆ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಅಧ್ಯಕ್ಷತೆ ವಹಿಸಲಿದ್ದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದರು.

ಎಪ್ರಿಲ್ 26ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಸುಮಾರು 345ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಸಮಾರಂಭ ನಡೆಯಲಿದೆ. ಈ ಬಾರಿ ಕಾಲೇಜಿನ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉದ್ಯೋಗ ಪಡೆದಿರುವುದು ಸಂಸ್ಥೆಯ ಹೆಮ್ಮೆಯ ವಿಷಯವಾಗಿದ್ದು, ಪೋಷಕರು ಈ ಸಂಭ್ರಮವನ್ನು ಕಣ್ತುಂಬಿಕೊಳ್ಳುವಂತೆ 'ಪ್ಲೇಸ್‌ಮೆಂಟ್ ಡೇ' ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಇದೇ ವೇಳೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ವಿಭಾಗದ ಮಹಿಳಾ ವಾಲಿಬಾಲ್ ಪಂದ್ಯಾವಳಿ ಎಪ್ರಿಲ್ 24ರಂದು ಕಾಲೇಜು ಆವರಣದಲ್ಲಿ ನಡೆಯಲಿದ್ದು, ಸುಮಾರು 10 ಕಾಲೇಜುಗಳ ನೂರಾರು ವಿದ್ಯಾರ್ಥಿನಿಯರು ಭಾಗವಹಿಸಲಿದ್ದಾರೆ ಎಂದು ಪ್ರೊ. ಎಸ್.ಎಫ್. ಕೊಡ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಡಾ. ಸುಭಾಸ್ ಮೇಟಿ, ಡಾ. ಗಿರೀಶ ಯತ್ತಿನಹಳ್ಳಿ, ಪ್ರೊ. ವಿಕ್ರಮ ಶಿರೋಳ, ಪ್ರೊ. ಪ್ರತಿಮಾ ಮಹಾಪುರುಷ, ಪ್ರೊ. ಗಿರೀಶ ಹಳ್ಳಿ, ಪ್ರೊ. ರಾಘವೇಂದ್ರ ಎ., ಚಂದ್ರಮೌಳಿ ಜೋಶಿ, ಲಕ್ಷ್ಮಣ ಪಾಟೀಲ, ಪ್ರೊ. ಸೋಮಶೇಖರ ಕೆರಿಮನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೆ.ಜೆ.ವಿ.ಎಸ್ ಜಿಲ್ಲಾ ಕಾರ್ಯದರ್ಶಿಯಾಗಿ ಎ.ಕೆ. ಮುಲ್ಲಾನವರ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಅನೇಕ ವರ್ಷಗಳಿಂದ ಮಕ್ಕಳ ಶೈಕ್ಷಣಿಕ ಸುಧಾರಣೆ, ಮಕ್ಕಳಲ್ಲಿ ವಿಜ್ಞಾನ ಮನೋಭಾವನೆ ಬೆಳೆಸುವುದು ಹಾಗೂ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಗಳ ಮೂಲಕ ಸಮಾಜಸೇವೆ ಮಾಡುತ್ತಿರುವ ಎ.ಕೆ. ಮುಲ್ಲಾನವರ ಅವರನ್ನು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಗದಗ ಜಿಲ್ಲಾ ಸಮಿತಿಯ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಗಿದೆ ಎಂದು ರಾಜ್ಯ ಸಮಿತಿಯ ಕಾರ್ಯದರ್ಶಿ ಈ. ಬಸವರಾಜು ತಿಳಿಸಿದ್ದಾರೆ.

ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯದಾದ್ಯಂತ ವಿವಿಧ ಜಿಲ್ಲೆ ಹಾಗೂ ತಾಲೂಕು ಘಟಕಗಳ ಮೂಲಕ ಶಿಕ್ಷಕರು ಮತ್ತು ಮಕ್ಕಳಿಗಾಗಿ ಶಿಬಿರಗಳನ್ನು ಆಯೋಜಿಸಿ, ವಿಜ್ಞಾನ ಚಿಂತನೆ ಬೆಳೆಸುವುದರ ಜೊತೆಗೆ ಸಮಾಜದಲ್ಲಿ ಅಡಗಿರುವ ಮೂಢನಂಬಿಕೆಗಳನ್ನು ದೂರ ಮಾಡುವ ಕಾರ್ಯವನ್ನು ನಿರಂತರವಾಗಿ ನಡೆಸುತ್ತಿದೆ. ರಾಜ್ಯ ಸಮಿತಿಯಲ್ಲಿ ವಿಜ್ಞಾನಿಗಳು, ವೈದ್ಯರು, ಉಪನ್ಯಾಸಕರು, ಚಿಂತಕರು ಹಾಗೂ ಸಾಹಿತಿಗಳು ತಮ್ಮದೇ ಆದ ಕೊಡುಗೆ ನೀಡುತ್ತಾ ಕಾರ್ಯನಿರ್ವಹಿಸುತ್ತಿದ್ದಾರೆ.


ಪ್ರತಿ ವಾರ ಆನ್‌ಲೈನ್ ಸಭೆಗಳ ಮೂಲಕ ವಿವಿಧ ವಿಷಯಗಳ ಕುರಿತು ಅನುಭವಿಗಳಿಂದ ಮಾಹಿತಿ ಹಂಚಿಕೊಳ್ಳಲಾಗುತ್ತಿದ್ದು, ಈ ಕಾರ್ಯ ಕ್ರಮಬದ್ಧವಾಗಿ ಮುಂದುವರಿದಿದೆ ಎಂದು ಈ. ಬಸವರಾಜು ತಿಳಿಸಿದರು.

ಗದಗ ಜಿಲ್ಲೆಗೆ ಒಬ್ಬ ಉತ್ತಮ ಚಿಂತಕ ಹಾಗೂ ಸಂಘಟಕರಾದ ಎ.ಕೆ. ಮುಲ್ಲಾನವರರನ್ನು ಜಿಲ್ಲಾ ಕಾರ್ಯದರ್ಶಿಯಾಗಿ ಆಯ್ಕೆ ಮಾಡಿರುವುದು ಸಂತಸದ ವಿಚಾರ. ಅವರ ಸೇವೆ ಜಿಲ್ಲೆಯ ಮಕ್ಕಳಿಗೆ ಹಾಗೂ ಸಮಾಜಕ್ಕೆ ಲಾಭಕಾರಿಯಾಗಲಿ, ಸಮಿತಿಯ ಮೂಲಕ ಜನರಿಗೆ ಹಾಗೂ ಮಕ್ಕಳಿಗೆ ಉತ್ತಮ ಕಾರ್ಯಕ್ರಮಗಳು ದೊರೆಯಲಿ ಎಂದು ಅವರು ಅಭಿಪ್ರಾಯಪಟ್ಟರು.

# ದೇವಸ್ಥಾನಗಳು ಸಂಸ್ಕೃತಿ-ಸಂಸ್ಕಾರದ ಶಕ್ತಿ ಕೇಂದ್ರಗಳು

## ಶ್ರೀ ಸಾಲೇಶ್ವರ ದೇವಸ್ಥಾನ ಲೋಕಾರ್ಪಣೆಗೊಳಿಸಿದ ಶ್ರೀ ಚನ್ನವೀರ ಮಹಾಸ್ವಾಮಿಗಳು ಅಭಿಮತ

ಸಾನಿಧ್ಯವಹಿಸಿದ್ದ ಕರೇವಾಡಿ ಮಠದ ಶ್ರೀ ಮಳೇ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಮಾತನಾಡಿ, ದೇವಸ್ಥಾನಗಳು ಮನುಷ್ಯರಲ್ಲಿನ ಶ್ರೇಷ್ಠ ಗುಣಗಳನ್ನು ಜಾಗೃತಗೊಳಿಸುತ್ತವೆ. ಹುಟ್ಟು ಆಕಸ್ಮಿಕ, ಸಾವು ನಿಶ್ಚಿತ. ಈ ನಡುವಿನ ಅವಧಿಯಲ್ಲಿ ಮಾಡುವ ಧರ್ಮ ಮತ್ತು ಸಾಮಾಜಿಕ ಕಾರ್ಯಗಳು ಶಾಶ್ವತವಾಗಿರುತ್ತವೆ ಎಂದು ಹೇಳಿದರು. ಸಮಾಜದವರು ತಮ್ಮ ಮಕ್ಕಳನ್ನು ಸಮಾಜಮುಖಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸಬೇಕು ಎಂದು ತಿಳಿಸಿದರು.




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಜನರಲ್ಲಿ ಧಾರ್ಮಿಕ ಭಾವನೆ, ಭಯ-ಭಕ್ತಿ ಮೂಡಿಸಿ ಸನ್ಮಾರ್ಗದತ್ತ ಕೊಂಡೊಯ್ಯುವ ಶ್ರದ್ಧಾ ಮತ್ತು ಶಕ್ತಿ ಕೇಂದ್ರಗಳಾಗಿವೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಬಸ್ತಿಬಣದಲ್ಲಿನ ಜೀರ್ಣೋದ್ಧಾರಗೊಂಡ ಪುರಾತನ ಪ್ರಸಿದ್ಧ ಶ್ರೀ ಸಾಲೇಶ್ವರ ದೇವಸ್ಥಾನದ ಲೋಕಾರ್ಪಣೆ ಹಾಗೂ ಧರ್ಮಸಭೆಯಲ್ಲಿ ಸಾನಿಧ್ಯವಹಿಸಿ ಅವರು ಆಶೀರ್ವಚನ ನೀಡಿದರು. ದೇವಸ್ಥಾನಗಳು ಪರಸ್ಪರ ಒಗ್ಗಟ್ಟು, ಸ್ನೇಹ, ಸೌಹಾರ್ದತೆ ಮತ್ತು ಭಾಂಧವ್ಯ ಬೆಸೆಯುತ್ತವೆ. ಸಮಾಜದ ಸಂಘಟಿತ ಪರಿಶ್ರಮದ ಫಲವಾಗಿ ಜೀರ್ಣೋದ್ಧಾರಗೊಂಡಿರುವ ಸಾಲೇಶ್ವರ ದೇವಸ್ಥಾನ ಸತ್ಕಾರ್ಯ, ಧರ್ಮಕಾರ್ಯ ಹಾಗೂ ಸಮಾಜಮುಖಿ ಕಾರ್ಯಗಳಿಗೆ ಬಳಕೆಯಾಗಲಿ ಎಂದು ಹೇಳಿದರು.

ದೇವಸ್ಥಾನಗಳಲ್ಲಿ ಸ್ವಚ್ಛತೆ ಮತ್ತು ಪಾವಿತ್ರ್ಯತೆ ಕಾಪಾಡುವ ಜವಾಬ್ದಾರಿ ಎಲ್ಲರದ್ದಾಗಿದೆ. ಶಿವಸಮಸಾಲಿ ಸಮಾಜದ ಬಾಂಧವರು ಮಕ್ಕಳಿಗೆ ಶಿಕ್ಷಣದ ಜೊತೆಗೆ ದೇವರು, ಧರ್ಮ, ಸಂಪ್ರದಾಯ ಹಾಗೂ ಸಂಸ್ಕಾರದ ಅರಿವು ಮೂಡಿಸಬೇಕು. ಯುವಕರು ದುಶ್ಚಟಗಳಿಂದ ದೂರವಿದ್ದು ತಂದೆ-ತಾಯಿ, ಗುರು-ಹಿರಿಯರಿಗೆ ವಿಧೇಯರಾಗಿರಬೇಕು ಎಂದು ಅವರು ಸಲಹೆ ನೀಡಿದರು.

ಶಿವಸಮಸಾಲಿ ಸಮಾಜದ ಅಧ್ಯಕ್ಷ ಶಾಂತಪ್ಪ ಗುಡಗೇರಿ ಅಧ್ಯಕ್ಷತೆ ವಹಿಸಿದ್ದರು. ವಿರುಪಾಕ್ಷಪ್ಪ ಪಡಗೇರಿ, ಯಲ್ಲವ್ವ ದುರಗಣ್ಣವರ, ಬಸವರಾಜ ಓದುನವರ, ರಾಜಣ್ಣ ಕುಂಬಿ, ಶಂಕರ ಕೋಳಿವಾಡ, ಆಯ್.ಎಸ್. ಹುಲ್ಲೂರ, ನಿಂಗಪ್ಪ ಮಂಟಗಣಿ, ಸಾವಿತ್ರಮ್ಮ ನೇಕಾರ, ಅಶೋಕ ಮಂಡಿಗನಾಳ, ಮಲ್ಲಪ್ಪ ಮಂಟಗಣಿ, ವೀರಭದ್ರಪ್ಪ ಕಲಕೋಟಿ, ಎಸ್.ಆರ್. ಕೋಳಿವಾಡ, ಎಂ.ಇ. ದುರ್ಗದ, ಈಶ್ವರ ನೇಕಾರ ಸೇರಿದಂತೆ ಅನೇಕ ಮುಖಂಡರು ಮತ್ತು ದೇವಸ್ಥಾನ ಸಮಿತಿ ಸದಸ್ಯರು ಭಾಗವಹಿಸಿದ್ದರು.

ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕ ನುಡಿದರು. ಕುಬೇರ ಕೋಷ್ಠಿ, ರಾಜೇಶ ಗುಡಗೇರಿ ಹಾಗೂ ರವಿ ನೀರಲಗಿ ಕಾರ್ಯಕ್ರಮ ನಿರೂಪಿಸಿದರು.

ಬೆಳಿಗ್ಗೆ ಪೂರ್ಣಕುಂಭ ಹಾಗೂ ಪಲ್ಲಕ್ಕಿ ಮೆರವಣಿಗೆ, ಮೂರ್ತಿ ಪ್ರಾಣಪ್ರತಿಷ್ಠಾಪನೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು.

# ಉರಿ ಬಿಸಿಲಿಗೆ ಶಿರಹಟ್ಟಿ ಜನತೆ ಸುಸ್ತು- ಆರೋಗ್ಯದಲ್ಲಿ ಏರುಪೇರು!

## ತಾಪಮಾನ ಏರಿಕೆಯಿಂದ ಜನಜೀವನ ಅಸ್ತವ್ಯಸ್ತ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚಿನ ದಿನಗಳಲ್ಲಿ ಉರಿ ಬಿಸಿಲಿನ ತಾಪಮಾನ ಏರಿಕೆಯಿಂದ ಶಿರಹಟ್ಟಿ ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಬೆಳಿಗ್ಗೆ 7 ಗಂಟೆಯಿಂದೇ ಆರಂಭವಾಗುವ ಬಿಸಿಲಿನ ಪ್ರಖರತೆ ಸಂಜೆಯವರೆಗೆ ಮುಂದುವರಿಯುತ್ತಿದ್ದು, ಜನರು ಸುಸ್ತಾಗುತ್ತಿರುವುದಲ್ಲದೆ ಕೆಲವರ ಆರೋಗ್ಯದಲ್ಲೂ ಏರುಪೇರು ಕಾಣಿಸುತ್ತಿದೆ.

**ಬಿಸಿಲಿನ ಹೊಡೆತಕ್ಕೆ ಜನತೆ ಸಂಕಷ್ಟ:** ಬೇಸಿಗೆ ಪೂರ್ಣವಾಗಿ ಆರಂಭವಾಗುವುದಕ್ಕೂ ಮುನ್ನವೇ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದೆ. ಅನಿವಾರ್ಯ ಕೆಲಸಗಳ ಹೊರತು ಜನರು ಹೊರಗೆ ಬರುವುದನ್ನು ಕಡಿಮೆ ಮಾಡಿದ್ದು, ತಾಲೂಕು ಕೇಂದ್ರಗಳಿಗೆ ಆಗಮಿಸುವವರ ಸಂಖ್ಯೆಯೂ ಇಳಿಮುಖವಾಗಿದೆ. ಅನೇಕರು ಬಿಸಿಲಿನ ತಾಪವನ್ನು ತಡೆಯಲಾಗದೇ ಮನೆಯಲ್ಲೇ ಉಳಿಯುವ ಪರಿಸ್ಥಿತಿ ನಿರ್ಮಾಣವಾಗಿದೆ.

**ಫ್ಯಾನ್‌ಗಳಿಂದಲೂ ಬಿಸಿ ಗಾಳಿ:** ಬಿಸಿಲಿನ ತೀವ್ರತೆಯಿಂದ ಮನೆ ಹಾಗೂ ಅಂಗಡಿಗಳಲ್ಲಿನ ಫ್ಯಾನ್‌ಗಳಿಂದಲೂ ತಂಪಿನ ಬದಲು ಬಿಸಿ ಗಾಳಿಯೇ ಬೀಸುತ್ತಿದ್ದು, ಜನರ ಸಂಕಷ್ಟ ಹೆಚ್ಚಿಸಿದೆ. ಎಸಿ ಸೌಲಭ್ಯವಿಲ್ಲದ ಮಧ್ಯಮ ವರ್ಗದವರು ಫ್ಯಾನ್‌ಗಳ ಮೇಲೆಯೇ ಅವಲಂಬಿತರಾಗಿ ಕಷ್ಟ ಅನುಭವಿಸುತ್ತಿದ್ದಾರೆ.

**ವಿದ್ಯುತ್ ವ್ಯತ್ಯಯದಿಂದ ಹೆಚ್ಚುವರಿ ತೊಂದರೆ:** ಎಸಿ, ಫ್ಯಾನ್, ಕೂಲರ್‌ಗಳ ಮೇಲೆ ಅವಲಂಬನೆ ಹೆಚ್ಚಾಗಿರುವ ನಡುವೆಯೇ ವಿದ್ಯುತ್ ವ್ಯತ್ಯಯ ಉಂಟಾದರೆ ಜನರಿಗೆ ಇನ್ನಷ್ಟು ಸಂಕಷ್ಟ ಎದುರಾಗುತ್ತಿದೆ. ವಿಶೇಷವಾಗಿ ರಾತ್ರಿ ವೇಳೆ ವಿದ್ಯುತ್ ಕಡಿತವಾದರೆ ನಿದ್ರೆಯೂ ಕಷ್ಟವಾಗುತ್ತಿದೆ.

ಒಟ್ಟಿನಲ್ಲಿ, ಉರಿ ಬಿಸಿಲಿನ ತೀವ್ರತೆಗೆ ಜನರು ಹತಾಶರಾಗಿದ್ದು, ಆರೋಗ್ಯ ಕಾಪಾಡಿಕೊಳ್ಳಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಎದುರಾಗಿದೆ.

### ತಂಪು ಪಾನೀಯಗಳತ್ತ ಜನರ ಒಲವು

ಬಿಸಿಲಿನ ತಾಪದಿಂದ ಸ್ವಲ್ಪ ನೆಮ್ಮದಿ ಪಡೆಯಲು ಜನರು ಎಳೆನೀರು, ಕಲ್ಲಂಗಡಿ, ಕಬ್ಬಿನ ರಸ, ಮಜ್ಜಿಗೆ ಹಾಗೂ ಕೋಲ್ಡ್ ಡ್ರಿಂಕ್ಸ್‌ಗಳತ್ತ ಮುಖ ಮಾಡುತ್ತಿದ್ದಾರೆ. ಬೆಲೆ ಏರಿಕೆಯಿದ್ದರೂ ತಂಪು ಪಾನೀಯಗಳ ಬೇಡಿಕೆ ಹೆಚ್ಚಾಗಿದೆ.

# ಮಹಿಳೆ-ಮಕ್ಕಳ ರಕ್ಷಣೆಗೆ ಅಕ್ಕಪಡೆ ಬಲಪಡಿಸಿ

## ಸಾರ್ವಜನಿಕ ಸ್ಥಳಗಳಲ್ಲಿ ಪೆಟ್ರೋಲಿಂಗ್ ಹೆಚ್ಚಿಸಲು ಹೆಬ್ಬಾಳ್ಕರ್ ಸೂಚನೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

"ಮಹಿಳೆಯರು ಮತ್ತು ಅಪ್ರಾಪ್ತ ಬಾಲಕಿಯರ ಸುರಕ್ಷತೆಗಾಗಿ ಜಾರಿಗೆ ತರಲಾಗಿರುವ ಅಕ್ಕಪಡೆ ಯೋಜನೆಯ ಉದ್ದೇಶ ಸಂಕಷ್ಟದಲ್ಲಿರುವ ಮಹಿಳೆಯರು ಮತ್ತು ಬಾಲಕಿಯರಿಗೆ ತಕ್ಷಣದ ರಕ್ಷಣೆ ಹಾಗೂ ನೆರವು ನೀಡುವುದಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಪೆಟ್ರೋಲಿಂಗ್ ನಡೆಸಿ ಮಹಿಳೆಯರಲ್ಲಿ ಭದ್ರತೆಯ ವಿಶ್ವಾಸ ಮೂಡಿಸಬೇಕು," ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆದ ಅಕ್ಕಪಡೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಭೆಯಲ್ಲಿ ಮಾತನಾಡಿದ ಅವರು, "ಮಾಲ್‌ಗಳು, ಜಾತ್ರಾ ಮಹೋತ್ಸವಗಳು, ಮಹಿಳಾ ವಸತಿ ನಿಲಯಗಳು, ಕಾಲೇಜುಗಳು, ಶಿಕ್ಷಣ ಸಂಸ್ಥೆಗಳು, ರೈಲು ನಿಲ್ದಾಣಗಳು ಸೇರಿದಂತೆ ಜನನಿಬಿಡ ಪ್ರದೇಶಗಳಲ್ಲಿ ತಂಡಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು," ಎಂದು ಸೂಚಿಸಿದರು.

"ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯ ಕುರಿತು ಜನರಲ್ಲಿ ಅರಿವು ಮೂಡಿಸುವುದು ಅಗತ್ಯ. ಜೊತೆಗೆ ಕಬ್ಬು ಮತ್ತು ಕಟ್ಟಿಗೆ ಕಟಾವಿನಲ್ಲಿ ತೊಡಗಿರುವ ಪೋಷಕರ ಮಕ್ಕಳನ್ನು ಶಾಲೆಗೆ ಸೇರಿಸುವುದು ಹಾಗೂ ಅಗತ್ಯವಿದ್ದಲ್ಲಿ ವಸತಿ ಸೌಲಭ್ಯ ಕಲ್ಪಿಸುವ ಕಾರ್ಯಕ್ಕೂ ಅಕ್ಕಪಡೆ ತಂಡಗಳು ಮುಂದಾಗಬೇಕು," ಎಂದು ಹೇಳಿದರು.

ತಂಡಗಳಿಗೆ ಲ್ಯಾಪ್‌ಟಾಪ್ ಹಾಗೂ ಇಂಟರ್‌ನೆಟ್ ಸೌಲಭ್ಯ ಹೊಂದಿದ ಮೊಬೈಲ್ ನೀಡುವ ಕುರಿತು ಸರ್ಕಾರದೊಂದಿಗೆ ಚರ್ಚಿಸಲಾಗುವುದು ಎಂದರು.

ಧಾರವಾಡ ಜಿಲ್ಲೆಯಲ್ಲಿ ಎರಡು ಅಕ್ಕಪಡೆ ತಂಡಗಳು ಕಾರ್ಯನಿರ್ವಹಿಸುತ್ತಿದ್ದು, ಬಾಲ್ಯವಿವಾಹ, ಪೋಕ್ಸೋ ಪ್ರಕರಣಗಳು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ರಕ್ಷಿಸಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವ ಕಾರ್ಯ ನಡೆಯುತ್ತಿದೆ ಎಂದು ಮಹಿಳಾ ಕಲ್ಯಾಣಾಧಿಕಾರಿ ವಿಜಯಲಕ್ಷ್ಮಿ ಪಾಟೀಲ ತಿಳಿಸಿದರು.

ಸಭೆಯಲ್ಲಿ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಗೂ ಪತ್ರಿಕಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಎರಡು ಪಾಳಿಗಳಲ್ಲಿ ಕಾರ್ಯನಿರ್ವಹಣೆ

ಅಕ್ಕಪಡೆ ತಂಡಗಳು ಎರಡು ಪಾಳಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಬೆಳಿಗ್ಗೆ 8ರಿಂದ ಮಧ್ಯಾಹ್ನ 2ರವರೆಗೆ ಮೊದಲ ಪಾಳಿ ಮತ್ತು ಮಧ್ಯಾಹ್ನ 1ರಿಂದ ರಾತ್ರಿ 8ರವರೆಗೆ ಎರಡನೇ ಪಾಳಿ ಸೇವೆ ನೀಡುತ್ತಿದೆ. ಪ್ರತಿದಿನ ಗಸ್ತು ತಿರುಗುವ ಮೂಲಕ ಬಂದ ಕರೆಗಳಿಗೆ ಸ್ಪಂದಿಸಿ ಮಹಿಳೆ ಮತ್ತು ಮಕ್ಕಳ ರಕ್ಷಣೆ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಪೊಲೀಸ್ ಇನ್ಸ್‌ಪೆಕ್ಟರ್ ಸಂಕನಾಳ ಮಾಹಿತಿ ನೀಡಿದರು.

# ಕಲೆ-ಕಲಾವಿದರ ಉಳಿವಿಗೆ ಸರ್ಕಾರದ ಪ್ರೋತ್ಸಾಹ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಕಲೆ ಮತ್ತು ಕಲಾವಿದರ ಅಸ್ತಿತ್ವ ಉಳಿಯಲು ಸರ್ಕಾರದ ಪ್ರೋತ್ಸಾಹ ಅಗತ್ಯವಿದ್ದು, ಕಲಾವಿದರು ಕಾಲಮಾನಕ್ಕೆ ತಕ್ಕಂತೆ ಹೊಂದಿಕೊಳ್ಳಬೇಕು ಎಂದು ವಿಜಯ ಲಲಿತಕಲಾ ಸಂಸ್ಥೆಯ ಅಧ್ಯಕ್ಷ ಪ್ರೊ. ಅಶೋಕ ಅಕ್ಕಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ, ದೃಶ್ಯ ಕಲಾವಿದರ ಸಂಘ ಹಾಗೂ ಪೂರ್ಣತಾರೆ ಜನಸೇವಾ ಸಂಸ್ಥೆಯ ಸಹಯೋಗದಲ್ಲಿ ತೆ-ೋಂಟದ ಸಿದ್ದಲಿಂಗ ಶ್ರೀಗಳ ಕನ್ನಡ ಭವನದಲ್ಲಿ ನಡೆದ ವಿಶ್ವ ಕಲಾ ದಿನಾಚರಣೆ, ಕಲಾಪ್ರದರ್ಶನ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ವಿಂಚಿ ಮಹಾನ್ ಕಲಾವಿದರಾಗಿದ್ದು, ವಿಶ್ವ ಕಲಾ ದಿನಾಚರಣೆಯ ಮೂಲಕ ಇಂತಹ ಕಲಾವಿದರನ್ನು ಸ್ಮರಿಸಲಾಗುತ್ತದೆ. ಶಾಲಾ-ಕಾಲೇಜುಗಳಲ್ಲಿ ಕೌಶಲ್ಯ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕಾಗಿದ್ದು, ಕಲಾ ಶಿಕ್ಷಕರ ನೇಮಕಾತಿಗೆ ಸರ್ಕಾರ ಮುಂದಾಗಬೇಕು ಎಂದು ಅವರು ಹೇಳಿದರು.

ಜನಪದ ಚಿತ್ರಕಲೆ ಕುರಿತು ಉಪನ್ಯಾಸ ನೀಡಿದ ಡಾ. ವಿಜಯಲಕ್ಷ್ಮಿ ಗೇಟಿ, ಜನಪದ ಕಲೆಗಳು ಮಾನವನ ಜೀವನ, ಸಂಸ್ಕೃತಿ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಿಕ್ಷಣದಲ್ಲಿ ಲಲಿತಕಲೆಗಳಿಗೆ ಅಂಕ ನಿಗದಿ ಮಾಡಿದರೆ ಮಾತ್ರ ಈ ಕ್ಷೇತ್ರಕ್ಕೆ ಪ್ರಾಮುಖ್ಯತೆ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು.

ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಷಹಜಾನ ಮುದಕವಿ ಕಲಾ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಹಾಗೂ ಜನಪ್ರತಿನಿಧಿಗಳು ಹೆಚ್ಚು ಗಮನ ಹರಿಸಬೇಕು ಎಂದು ಹೇಳಿದರು.

ದೃಶ್ಯ ಕಲಾವಿದರ ಸಂಘದ ಅಧ್ಯಕ್ಷ ಡಾ. ಬಿ.ಎಲ್. ಚವ್ಹಾಣ ಮಾತನಾಡಿ, ಕಲಾವಿದರ ಗೌರವ ಹೆಚ್ಚಿಸಲು ಕನ್ನಡ ಸಾಹಿತ್ಯ ಪರಿಷತ್ತು ನೀಡುತ್ತಿರುವ ಸಹಕಾರ ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಎಂ.ಆರ್. ಹೆಬ್ಬಳ್ಳಿ, ಬಿ.ಕೆ. ನಿಂಬನಗೌಡರ, ಬಸವರಾಜ ನೆಲಜೇರಿ ಹಾಗೂ ರಮೇಶ ಮುರಗೋಡ ಅವರನ್ನು ಸನ್ಮಾನಿಸಲಾಯಿತು. ಕುಮಾರಿ ವೈಷ್ಣವಿ ರಾಠೋಡ ಅವರ ನೃತ್ಯ ಪ್ರದರ್ಶನ ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ಅನೇಕ ಕಲಾವಿದರು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಮಕ್ಕಳ ಸಾಹಿತ್ಯ ಮಕ್ಕಳಿಂದಲೇ ಬಂದರೆ ಹೆಚ್ಚು ಪರಿಪೂರ್ಣತೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳಿಂದಲೇ ಮಕ್ಕಳಿಗಾಗಿ ಸಾಹಿತ್ಯ ರಚನೆಯಾದಾಗ ಅದು ಹೆಚ್ಚು ಸಹಜ, ಔಚಿತ್ಯಪೂರ್ಣ ಹಾಗೂ ಮುಗ್ಧ ಮನಸ್ಸಿಗೆ ಸಮೀಪವಾಗಿರುತ್ತದೆ ಎಂದು ಮಕ್ಕಳ ಸಾಹಿತ್ಯ ಸಂಶೋಧಕ ಡಾ. ರಾಜೇಂದ್ರ ಗಡಾದ ಅಭಿಪ್ರಾಯಪಟ್ಟರು.

ನಗರದ ಎಸ್.ವೈ.ಬಿ.ಎಂ.ಎಸ್. ಯೋಗಪಾಠಶಾಲೆ ಹಾಗೂ ಶ್ರೀ ಜಗದ್ಗುರು ತೋಂಟ-ದಾರ್ಯ ಜಾತ್ರಾಮಹೋತ್ಸವ ಸಮಿತಿ-2026 ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಆಯೋಜಿಸಿದ್ದ 21ನೇ ಸಂಸ್ಕೃತಿ-ಸಂಸ್ಕಾರ ಶಿಬಿರದಲ್ಲಿ ಅವರು ಮಾತನಾಡಿದರು.

ಮಕ್ಕಳಿಗಾಗಿ ಸಾಹಿತಿಗಳು ಎಷ್ಟೇ ಪ್ರಯತ್ನಪಟ್ಟು ಸಾಹಿತ್ಯ ರಚಿಸಿದರೂ, ಅದು ಮಕ್ಕಳ ಮನಸ್ಸಿಗೆ ಸಂಪೂರ್ಣವಾಗಿ ತಲುಪುವುದು ಕೆಲವೊಮ್ಮೆ ಕಷ್ಟಕರವಾಗುತ್ತದೆ. ಆದರೆ ಮಕ್ಕಳು ಸ್ವತಃ ಕಥೆ, ಕವನಗಳನ್ನು ರಚಿಸಿದಾಗ ಅದು ಅವರ ಭಾವನೆಗಳಿಗೆ ಹೆಚ್ಚು ಹತ್ತಿರವಾಗಿದ್ದು, ಸಹಜ ಅಭಿವ್ಯಕ್ತಿಗೆ ದಾರಿ ಮಾಡಿಕೊಡುತ್ತದೆ ಎಂದು ಹೇಳಿದರು.

ಶಿಬಿರಾರ್ಥಿಗಳಿಗೆ ಕಥೆ, ಕವನ ಹಾಗೂ ಸಾಹಿತ್ಯ ರಚನೆಗೆ ಪ್ರೇರಣೆ ನೀಡಿದ ಅವರು, ಮಕ್ಕಳಿಂದಲೇ ಅವರ ಕೃತಿಗಳನ್ನು ಓದಿಸಿ ಅವರಲ್ಲಿರುವ ಸೃಜನಶೀಲತೆಯನ್ನು ಮೆಚ್ಚಿದರು. ಉತ್ತಮವಾಗಿ ರಚನೆ ಮಾಡಿದ ಮಕ್ಕಳಿಗೆ ನಾಡು-ನುಡಿ ಪುಸ್ತಕಗಳನ್ನು ಬಹುಮಾನವಾಗಿ ನೀಡಿ ಉತ್ತೇಜಿಸಿದರು.

ಈ ಸಂದರ್ಭದಲ್ಲಿ ಶಿಬಿರ ಸಂಯೋಜಕ ಕೆ.ಎಸ್. ಪಲ್ಲೇದ, ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಂ. ಬುರಡಿ ಹಾಗೂ ವಚನ ಸಂಗೀತ ಶಿಕ್ಷಕಿ ಸುನಂದಾ ಜ್ಞಾನೋಪಂತ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಡಾ. ರಾಜೇಂದ್ರ ಗಡಾದ ಅವರನ್ನು ಶಿಬಿರಾರ್ಥಿಗಳು ಹಾಗೂ ಸಂಘಟಕರು ಸನ್ಮಾನಿಸಿದರು.



# ವಿಜೃಂಭಣೆಯಿಂದ ಜರುಗಿದ ಗುಡ್ಡದ ದುರ್ಗಮ್ಮ ಜಾತ್ರೆ

## ಸಾವಿರಾರು ಭಕ್ತರ ಸಂಭ್ರಮ, ಸಂಪ್ರದಾಯಗಳಿಗೆ ಸಾಕ್ಷಿಯಾದ ಜಾತ್ರೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮದ ಆರಾಧ್ಯ ದೇವಿ ಗುಡ್ಡದ ದುರ್ಗಮ್ಮ ಜಾತ್ರೆ ಚಂದ್ರಮನ ಗುಡ್ಡದ ಹತ್ತಿರ ಭಕ್ತಿಭಾವದಿಂದ ವಿಜೃಂಭಣೆಯಿಂದ ನೆರವೇರಿತು.

ಊರಿಂದ ಸುಮಾರು ಮೂರು ಕಿಲೋಮೀಟರ್ ದೂರದಲ್ಲಿರುವ ಜಾತ್ರೆ ಸ್ಥಳಕ್ಕೆ ಸಾವಿರಾರು ಭಕ್ತರು ಆಗಮಿಸಿ ಸಂಭ್ರಮಿಸಿದರು. ಪುರಾತನ ಕಾಲದಿಂದಲೂ ಈ ಜಾತ್ರೆಯನ್ನು ಗುಡ್ಡದಲ್ಲಿ ಆಚರಿಸಿಕೊಂಡು ಬರುತ್ತಿದ್ದು, ಪ್ರತಿ ವರ್ಷ ಎಪ್ರಿಲ್ ತಿಂಗಳಲ್ಲಿ ನಡೆಯುವುದು ವಿಶೇಷವಾಗಿದೆ. ಹಂಪಾಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಗುಡ್ಡಕ್ಕೆ ಆಗಮಿಸಿ ದೇವಿಗೆ ಪೂಜೆ ಸಲ್ಲಿಸುವುದು ಪ್ರಮುಖ ಸಂಪ್ರದಾಯವಾಗಿದೆ. ಜಾತ್ರೆಯ ಅಂಗವಾಗಿ ದೇವಿಗೆ ಗಂಗೆ ಪೂಜೆ ನೆರವೇರಿಸಲಾಯಿತು. ಬಳಿಕ ನಡೆದ ಪಟಾಕ್ಷಿ ಹರಾಜಿನಲ್ಲಿ ಆದರ ಮಗ್ಗಿ ಯಂಕಪ್ಪನ ಮಗ ನಾಗರಾಜ್ ಅವರು ರೂ.21,101ಕ್ಕೆ ಹರಾಜು ಪಡೆದು ದೇವಿಯ ಸೇವೆಯಲ್ಲಿ ತೊಡಗಿದರು. ನಂತರ ಭಕ್ತರು ಗುಡಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ರೈತರು ತಮ್ಮ ಎತ್ತುಗಳನ್ನು ಗುಡಿಯ ಸುತ್ತ ಮೂರು ಬಾರಿ ಪ್ರದಕ್ಷಿಣೆ ಮಾಡಿಸಿ ಭಕ್ತಿ ಅರ್ಪಿಸಿದ ದೃಶ್ಯಗಳು ಗಮನ ಸೆಳೆದವು. ಜಾತ್ರೆ ಮೈದಾನದಲ್ಲಿ ಮಂಡಕ್ಕಿ ಸೇರಿದಂತೆ ವಿವಿಧ ತಿಂಡಿಗಳ ಸವಿಯನ್ನು ಭಕ್ತರು ಆಸ್ವಾದಿಸಿದರು.

ದೇವಸ್ಥಾನದ ಪೂಜಾರಿಗಳಾಗಿ ಪಶುಪತಿ ಕಾರ್ಯನಿರ್ವಹಿಸಿದರು. ಬಟಾಣಿ ದುರ್ಗಪ್ಪ, ಪಾಂಡುರಂಗ ಹುಲಗಪ್ಪ, ಎಚ್.ಟಿ. ನಿಂಗಪ್ಪ, ಚೌಟಗಿ ಕೊಟ್ರಪ್ಪ, ಎಚ್. ಸೋಮನಾಥ, ಎಚ್. ರಮೇಶ್, ಗೌಡಿ ಸೋಮನಾಥ, ಎಚ್. ಹುಲುಗಪ್ಪ, ಎಚ್. ದುರ್ಗಪ್ಪ, ಶೀಗೆನಹಳ್ಳಿ ಬಸವರಾಜ್ ಸೇರಿದಂತೆ ಹಲವರು ಜಾತ್ರೆ ವ್ಯವಸ್ಥೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಹಲಗೆ ವಾದಕರು ಭಾಗವಹಿಸಿದ್ದು, ಭಕ್ತರು ದಿಂಡಿ ನಮಸ್ಕಾರ ಸಲ್ಲಿಸಿದರು. ಜಾತ್ರೆ ಶಾಂತಿಯುತವಾಗಿ ಹಾಗೂ ಯಶಸ್ವಿಯಾಗಿ ನೆರವೇರಿತು. ಹಂಪಾಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ತಾಯಿ ಆಶೀರ್ವಾದಕ್ಕೆ ಸಾಕ್ಷಿಯಾದರು. ಗ್ರಾಮ ಪಂಚಾಯಿತಿ ವತಿಯಿಂದ ಭಕ್ತರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿತ್ತು.

